660

## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: : 543
ಮಾನ್ಯ ಸದಸ್ಯರ ಹೆಸರು : ಶ್ರೀ ಎಸ್. ವ್ಹಿ. ಸಂಕನೂರ
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿ
ಉತ್ತರಿಸಬೇಕಾದ ದಿನಾಂಕ : 12.12.2024

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಅನುದಾನಿತ/ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ಉಪನ್ಯಾಸಕರ ನೇಮಕಾತಿ ಮಾಡಲು ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ 120ರ ಬದಲಾಗಿ 500 ಇರಬೇಕು ಎಂಬ ನಿರ್ಬಂಧ ಇದೆಯೇ; ಆರ್ಥಿಕ ಇಲಾಖೆಯಿಂದ ಹಾಗಿದ್ದಲ್ಲಿ ಈ ರೀತಿ ನಿರ್ಬಂಧ ವಿಧಿಸಲು ಕಾರಣಗಳೇನು; (ವಿವರ ನೀಡುವುದು) | ಪ್ರಸ್ತುತ ಇರುವ ಮಾನದಂಡದಂತೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 500 ವಿದ್ಯಾರ್ಥಿಗಳ ಸಂಖ್ಯಾ ಬಲವಿರುವ ಕಾಲೇಜುಗಳಿಗೆ ಒಬ್ಬ ದೈಹಿಕ ಶಿಕ್ಷಣ ಉಪನ್ಯಾಸಕರನ್ನು ಹಾಗೂ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ 120 ವಿದ್ಯಾರ್ಥಿಗಳ ಸಂಖ್ಯಾ ಬಲವಿರುವ ಕಾಲೇಜುಗಳಿಗೆ ಒಬ್ಬ ದೈಹಿಕ ಶಿಕ್ಷಣ ಉಪನ್ಯಾಸಕರನ್ನು ನೇಮಕ ಮಾಡಲು ಅವಕಾಶವಿರುತ್ತದೆ.<br><br>ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಮತ್ತು ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಪಾಲಿಸಲಾಗುತ್ತಿರುವ ಮಾನದಂಡನೆಗಳಲ್ಲಿ ಸಮಾನತೆ ತರಲು ಅನುದಾನಿತ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆ ಮಂಜೂರು ಮಾಡಲು 500 ವಿದ್ಯಾರ್ಥಿಗಳ ಸಂಖ್ಯಾಬಲ ನಿಗದಿಪಡಿಸಲು ಸೂಚಿಸಲಾಗಿರುತ್ತದೆ. |
| (ಆ) | ದೈಹಿಕ ಶಿಕ್ಷಣ ಉಪನ್ಯಾಸಕರ ನೇಮಕಾತಿಗೆ ಆರ್ಥಿಕ ಇಲಾಖೆ ವಿದ್ಯಾರ್ಥಿಗಳ ಸಂಖ್ಯೆ ನಿಗಧಿಪಡಿಸಿರುವುದು ಸರಿಯೇ; ಇದರಿಂದ ಉಂಟಾಗುವ ಪರಿಣಾಮಗಳ ಬಗ್ಗೆ ಸರ್ಕಾರ ಗಮನಿಸಿದೆಯೇ ಹಾಗಿದ್ದಲ್ಲಿ ಈ ಬಗ್ಗೆ ಸೂಕ್ತ ಕ್ರಮವನ್ನು ಕೈಗೊಳ್ಳಲಾಗುವುದೇ? | ಸರ್ಕಾರಿ ಮತ್ತು ಖಾಸಗಿ ಅನುದಾನಿತ ಕಾಲೇಜುಗಳೆರಡರಲ್ಲೂ ಯಾವುದೇ ವಿಷಯದ ಶಿಕ್ಷಕರ ನೇಮಕಾತಿಗೆ ವಿದ್ಯಾರ್ಥಿಗಳ ಸಂಖ್ಯಾಬಲವನ್ನು ನಿಗದಿಪಡಿಸುವುದು ರೂಢಿಯ ಪದ್ಧತಿಯಾಗಿರುತ್ತದೆ. |

ಸಂಖ್ಯೆ:ಆಇ 746 ವೆಚ್ಚ-8 2024

(ಸಿದ್ದರಾಮಯ್ಯ)
ಮುಖ್ಯಮಂತ್ರಿ